ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

ಹನ್ನೆರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಶನಿವಾರ, ದಿನಾಂಕ 3ನೇ ಡಿಸೆಂಬರ್, 2016

(ಸಮಯ ಬೆಳಗ್ಗೆ : 11.00 ಗಂಟೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೇ ಪಟ್ಟಿ

2. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. **ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಆರ್. ಅಶೋಕ, ವಿಶ್ವೇಶ್ವರ ಹೆಗಡೆ ಕಾಗೇರಿ, ಕೆ.ಜಿ. ಬೋಪಯ್ಯ, ಎಸ್. ಸುರೇಶ್ ಕುಮಾರ್ ಮತ್ತು ಇತರರು** – ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿರುವ ವಿಷಯದ ಬಗ್ಗೆ ನಡೆದ ಚರ್ಚೆಗೆ **ಸರ್ಕಾರದ ಉತ್ತರ**.

2. **ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಆರ್. ಅಶೋಕ, ಗೋವಿಂದ ಎಂ. ಕಾರಜೋಳ, ವಿಶ್ವೇಶ್ವರ ಹೆಗಡೆ ಕಾಗೇರಿ, ಎಸ್. ಸುರೇಶ್ ಕುಮಾರ್ ಮತ್ತು ಇತರರು ಹಾಗೂ ಹೆಚ್.ಡಿ.ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಎನ್.ಹೆಚ್.ಕೋನರಡ್ಡಿ, ಸಿ.ಎನ್. ಬಾಲಕೃಷ್ಣ ಮತ್ತು ನಾರಾಯಣಗೌಡ ಅವರುಗಳು** – ಹೈದರಾಬಾದ್ – ಕರ್ನಾಟಕ ಸಮಗ್ರ ಅಭಿವೃದ್ಧಿಗಾಗಿ ಭಾರತ ಸಂವಿಧಾನದ ಅನುಚ್ಛೇದ 371 (ಜೆ)ಗೆ ತಿದ್ದುಪಡಿ ತಂದು ವಿಶೇಷ ಸ್ಥಾನಮಾನ ನೀಡಿದ್ದರೂ ಸಹ, ಅಲ್ಲಿನ ಜನರಿಗೆ ಅಗತ್ಯ ಸೌಲಭ್ಯ ಸಿಗದಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

3. **ಶ್ರೀಯುತರುಗಳಾದ ಹೆಚ್.ಡಿ.ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಜಿ.ಟಿ. ದೇವೇಗೌಡ, ಕೆ.ಎಂ.ಶಿವಲಿಂಗೇಗೌಡ ಮತ್ತು ಎನ್.ಹೆಚ್.ಕೋನರಡ್ಡಿ ಮತ್ತು ಇತರರು** ಕೇಂದ್ರ ಸರ್ಕಾರವು ಬಹುರಾಷ್ಟ್ರೀಯ ಕಂಪನಿಗಳು ಹಾಗೂ ಕಾರ್ಪೋರೇಟ್ ಸಂಸ್ಥೆಗಳಿಗೆ ಸಾಲ ಮನ್ನಾ ಮಾಡಿರುವಂತೆಯೇ ರೈತರ ರಾಷ್ಟ್ರೀಕೃತ ಬ್ಯಾಂಕ್ ಹಾಗೂ ಸಹಕಾರ ಬ್ಯಾಂಕ್‌ಗಳಲ್ಲಿ ಪಡೆದಿರುವ ಸಾಲವನ್ನು ಮನ್ನಾ ಮಾಡುವ ಬಗ್ಗೆ ಹಾಗೂ ಕೇಂದ್ರ ಸರ್ಕಾರ ಮತ್ತು ಭಾರತೀಯ ರಿಜರ್ವ್ ಬ್ಯಾಂಕಿನ ದಿನಾಂಕ: 14.11.2016ರ ಆದೇಶವನ್ನು ರೈತರಿಗೆ ಅನುಕೂಲವಾಗುವ ರೀತಿಯಲ್ಲಿ ಮಾರ್ಪಡಿಸುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

4. **ಶ್ರೀಯುತರುಗಳಾದ ಎಂ.ಟಿ. ಕೃಷ್ಣಪ್ಪ, ವೈ.ಎಸ್.ವಿ.ದತ್ತಾ, ಕೆ.ಎಂ. ಶಿವಲಿಂಗೇಗೌಡ, ಸಿ.ಎನ್.ಬಾಲಕೃಷ್ಣ, ಎಸ್.ಆರ್. ಶ್ರೀನಿವಾಸ್ ಮತ್ತು ಇತರರು** – ರಾಜ್ಯದಲ್ಲಿ ಕೊಬ್ಬರಿ ಮತ್ತು ತೆಂಗಿನಕಾಯಿ ಬೆಳೆಯ ದರಗಳು ಕನಿಷ್ಟ ಮಟ್ಟಕ್ಕೆ ಕುಸಿದಿರುವುದರಿಂದ ತೆಂಗು ಬೆಳೆಗಾರರು ತೀವ್ರ ಆರ್ಥಿಕ ಸಂಕಷ್ಟದಲ್ಲಿರುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

5. **ಶ್ರೀಯುತರುಗಳಾದ ಜೆ.ಆರ್. ಲೋಬೋ, ಅರಬೈಲ್ ಶಿವರಾಂ ಹೆಬ್ಬಾರ್, ಬಿ.ಎ. ಮೊಹಿದ್ದೀನ ಬಾವ, ಕೆ. ಅಭಯಚಂದ್ರ ಮತ್ತು ಶ್ರೀಮತಿ ಶಕುಂತಲಾ ಟಿ. ಶೆಟ್ಟಿ ಅವರುಗಳು** – ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಮಟ್ಟದಲ್ಲಿ ನಮೂನೆ 9 ಮತ್ತು 11ನ್ನು ನೀಡುವ ಕುರಿತು ಜನ ಸಾಮಾನ್ಯರು ಅನುಭವಿಸುವ ಬವಣೆಯ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

6. **ಶ್ರೀಯುತರುಗಳಾದ ಡಾ||ಕೆ. ಸುಧಾಕರ್, ಕ್ಯಾತಸಂದ್ರ ಎನ್. ರಾಜಣ್ಣ, ಕೆ. ಷಡಕ್ಷರಿ, ಆರ್. ನರೇಂದ್ರ ಹಾಗೂ ಇತರರು** – ಇತ್ತೀಚೆಗೆ ರೂ. 500/– ಮತ್ತು ರೂ. 1000/– ನೋಟುಗಳನ್ನು ರದ್ದುಪಡಿಸಿರುವುದರಿಂದ ರಾಜ್ಯದ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳ ಕಾರ್ಯಗಳು ಸ್ಥಗಿತಗೊಂಡಿದ್ದು, ಇದರಿಂದ ರೈತರ ಸಾಲ ಮರುಪಾವತಿ ಹಾಗೂ ಖಾತೆಯಿಂದ ಹಣವನ್ನು ಪಡೆಯಲು, ಹಾಲು ಉತ್ಪಾದಕರಿಗೆ ಹಣ ಬಟವಾಡೆ ಮಾಡಲು ಹಾಗೂ ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಹಣ ವಿತರಣೆಗೆ ತೊಂದರೆ ಉಂಟಾಗಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

7. **ಶ್ರೀಯುತರುಗಳಾದ ಬಿ.ಆರ್. ಪಾಟೀಲ್, ಜಾರಕಿಹೊಳಿ ಸತೀಶ್ ಲಕ್ಷ್ಮಣರಾವ್ ಮತ್ತು ಕ್ಯಾತಸಂದ್ರ ಎನ್. ರಾಜಣ್ಣ ಅವರುಗಳು** – ಖ್ಯಾತ ಸಾಹಿತಿ ಹಾಗೂ ಸಂಶೋಧಕರಾಗಿದ್ದ ಎಂ.ಎಂ. ಕಲಬುರಗಿ ಅವರ ಹತ್ಯೆ ನಡೆದು ಒಂದು ವರ್ಷ ಕಳೆದರೂ ಇಲ್ಲಿಯವರೆಗೆ ಹಂತಕರನ್ನು ಹಿಡಿಯಲು ವಿಳಂಬವಾಗಿರುವ ಹಾಗೂ ಪ್ರಕರಣದ ತನಿಖೆಯ ಬೆಳವಣಿಗೆಯ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

8. **ಶ್ರೀಯುತರುಗಳಾದ ಕೆ.ಎಸ್. ಪುಟ್ಟಣ್ಣಯ್ಯ, ಪಿ. ರಾಜೀವ್ ಮತ್ತು ಬಿ.ಆರ್. ಪಾಟೀಲ್ ಅವರುಗಳು** – ರೈತರು ಬೆಳೆದ ಕಬ್ಬಿಗೆ ಹಳೆ ಬಾಕಿ ಹಣವನ್ನು ಪಾವತಿಸದೇ ಇರುವುದು, ಈ ಸಾಲಿನ ಕಬ್ಬಿನ ಬೆಲೆ ನಿಗದಿ ಮಾಡದೇ ಮತ್ತು ಯಾವುದೇ ಸಭೆಯನ್ನೂ ಸಹ ಕರೆಯದಿರುವುದರಿಂದ ರೈತರು ಆತಂಕಕ್ಕೆ ಒಳಗಾಗಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

9. **ಶ್ರೀಯುತರುಗಳಾದ ಲಕ್ಷ್ಮಣ ಸಂಗಪ್ಪ ಸವದಿ, ಸಂಜಯ್ ಬಿ. ಪಾಟೀಲ್, ಗೋವಿಂದ ಎಂ. ಕಾರಜೋಳ ಮತ್ತು ವಿಶ್ವೇಶ್ವರ ಹೆಗಡೆ ಕಾಗೇರಿ ಅವರುಗಳು** – ಕೊಪ್ಪಳ ಜಿಲ್ಲೆಯ ಸಣ್ಣ ನೀರಾವರಿ ಇಲಾಖೆಯಲ್ಲಿ ಕಾಮಗಾರಿಗಳನ್ನು ಅನುಷ್ಠಾನಗೊಳಸದೇ ಬಿಲ್ಲುಗಳನ್ನು ಪಾವತಿಸಿ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

10. **ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಅರವಿಂದ ಚಂದ್ರಕಾಂತ ಬೆಲ್ಲದ್, ಆನಂದ ಅಲಿಯಾಸ್ ವಿಶ್ವನಾಥ ಚಂದ್ರಶೇಖರ ಮಾಮನಿ ಹಾಗೂ ಗುರುಪಾದಗೌಡ ಸಂಗನಗೌಡ ಪಾಟೀಲ್, ಬಿ.ಆರ್. ಯಾವಗಲ್ ಮತ್ತು ದೊಡ್ಡಮನಿ ರಾಮಕೃಷ್ಣ ಶಿದ್ಧಲಿಂಗಪ್ಪ ಇತರರು** – ಗದಗ ಜಿಲ್ಲೆಯ ಕಪ್ಪತ್ತಗುಡ್ಡ ಪ್ರದೇಶವನ್ನು "ಸಂರಕ್ಷಿತ ಅರಣ್ಯ ಪ್ರದೇಶ" ದಿಂದ ಕೈಬಿಡುವ ಸರ್ಕಾರದ ಆದೇಶದಿಂದ ಗಣಿಗಾರಿಕೆಗೆ ಅವಕಾಶ ನೀಡಿದಂತಾಗಿ, ಸದರಿ ಪ್ರದೇಶದ ಮೇಲೆ ಪ್ರತಿಕೂಲ ಪರಿಣಾಮ ಬೀರಲಿರುವ ಕುರಿತು ನೀಡಿರುವ ಸೂಚನೆಯ ಮೇಲೆ ಚರ್ಚೆ.

11. **ಶ್ರೀ ಎಂ. ಕೃಷ್ಣಾರೆಡ್ಡಿ ಅವರು** ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ನಗರದ ಸರ್ಕಾರಿ ಮಾಧ್ಯಮಿಕ ಹಿರಿಯ ಬಾಲಕರ ಪ್ರಾಥಮಿಕ ಶಾಲೆಯ ಆವರಣದಲ್ಲಿ ಅಕ್ರಮವಾಗಿ ಖಾಸಗಿ ವಾಣಿಜ್ಯ ಕಟ್ಟಡಗಳನ್ನು ನಿರ್ಮಾಣ ಮಾಡಿರುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

12. **ಶ್ರೀಯುತರುಗಳಾದ ಬಿ.ಬಿ. ನಿಂಗಯ್ಯ, ಬಿ.ಆರ್. ಪಾಟೀಲ್, ಎಸ್. ಸುರೇಶ್ ಕುಮಾರ್, ಕೆ.ಎಸ್. ಪುಟ್ಟಣ್ಣಯ್ಯ, ಕ್ಯಾತಸಂದ್ರ ಎನ್. ರಾಜಣ್ಣ ಮತ್ತು ಇತರರು** – ಅಭಿವೃದ್ಧಿ ಹೊಂದುತ್ತಿರುವ ನಮ್ಮ ದೇಶದಲ್ಲಿ ಮಹಾಮಹಿಮರ, ರಾಷ್ಟ್ರನಾಯಕರ ಹೆಸರಿನಲ್ಲಿ ಜಯಂತಿಗಳನ್ನು ಆಚರಿಸುವ ಸಂದರ್ಭದಲ್ಲಿ ಸರ್ಕಾರಿ ರಜೆಯನ್ನು ಘೋಷಿಸುವುದರ ಅವಶ್ಯಕತೆಯ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

13. **ಶ್ರೀಯುತರುಗಳಾದ ವೈ.ಎ. ನಾರಾಯಣಸ್ವಾಮಿ, ಡಾ||ಸಿ.ಎನ್. ಅಶ್ವಥ ನಾರಾಯಣ ಮತ್ತು ಶ್ರೀ ವಿ. ಸುನೀಲ್ ಕುಮಾರ್** ಅವರುಗಳು – ಬಿ.ಡಿ.ಎ ವತಿಯಿಂದ ನಿರ್ಮಿತಗೊಂಡಿರುವ ರಾಜಮಹಲ್ ವಿಲಾಸ್ ಬಡಾವಣೆಯ ಜಮೀನಿನ ಮಾಲೀಕರು ಇಂದಿಗೂ ಸಹ ಸದರಿ ಜಮೀನಿನ ಮೂಲ ಮಾಲಿಕತ್ವದ ಸ್ವಾಧೀನತೆಯನ್ನು ಹೊಂದಿದ್ದು ಪ್ರಸ್ತುತ ವಾಸಿಸುತ್ತಿರುವ ಸಾರ್ವಜನಿಕರಿಗೆ ರಿ–ಕಬ್ಜೆ ಮಾಡಿಕೊಡುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

೩. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಜಗದೀಶ್ ಶೆಟ್ಟರ್ ಅವರು** – ಬೆಂಗಳೂರಿನ ಸ್ಯಾಂಕಿ ಕೆರೆಯ ಆವರಣದ ಸರ್ಕಾರಿ ಭೂಮಿಯಲ್ಲಿ ಒತ್ತುವರಿ ಮಾಡಿ ಅನಧಿಕೃತವಾಗಿ ನಿರ್ಮಾಣಗೊಳ್ಳುತ್ತಿರುವ ಬೃಹತ್ ಕಟ್ಟಡಗಳನ್ನು ತೆರವುಗೊಳಿಸುವ ಬಗ್ಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

2. **ಶ್ರೀ ವಿಶ್ವನಾಥ್ ಈ. ಪಾಟೀಲ್ ಅವರು** – ಬೆಳಗಾವಿಯ ಮಾಹೇಶ್ವರಿ ಅಂಧ ಮಕ್ಕಳ ಶಾಲೆಗೆ ಬಾಕಿ ಇರುವ ಅನುದಾನವನ್ನು ತಕ್ಷಣವೇ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

3. **ಶ್ರೀ ಕೆ. ಶಿವಮೂರ್ತಿ ಅವರು** – ಶಿಕ್ಷಣ ಇಲಾಖೆಯ ಪರಿಶಿಷ್ಟ ಜಾತಿಯ ವಿದ್ಯಾ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡದಿರುವುದರಿಂದ ಉಂಟಾಗಿರುವ ಗಂಭೀರ ಪರಿಸ್ಥಿತಿಯ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

4. **ಶ್ರೀ ಎನ್.ಹೆಚ್. ಕೋನರಡ್ಡಿ ಅವರು** – ಸರ್ಕಾರದ ವತಿಯಿಂದ ಈರುಳ್ಳಿ ಖರೀದಿ ಕೇಂದ್ರದ ಅವಧಿಯನ್ನು ದಿನಾಂಕ: 31.12.2016 ರವರೆಗೆ ವಿಸ್ತರಿಸುವ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

5. **ಶ್ರೀ ಹೆಚ್.ಡಿ. ರೇವಣ್ಣ ಅವರು** – ಹೊಳೆನರಸೀಪುರ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದ ಹಲವಾರು ಮತಗಟ್ಟೆ ಅಧಿಕಾರಿಗಳು ಮತದಾರರ ಪಟ್ಟಿಯಲ್ಲಿ ಉದ್ದೇಶ ಪೂರ್ವಕವಾಗಿ ಹೆಸರುಗಳನ್ನು ತೆಗೆದು ಹಾಕುವುದಲ್ಲದೆ, ಬೇರೆ ಸ್ಥಳಗಳಲ್ಲಿರುವ ತಮಗೆ ಬೇಕಾದವರ ಹೆಸರುಗಳನ್ನು ಸೇರ್ಪಡೆಗೊಳಿಸುತ್ತಿರುವುದರಿಂದ ಮತದಾರರಿಗೆ ತೊಂದರೆಯುಂಟಾಗಿದ್ದು, ಇದಕ್ಕೆ ಕಾರಣರಾದವರ ಮೇಲೆ ನಿಯಮಾನುಸಾರ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

6. **ಶ್ರೀ ಗೋವಿಂದ ಎಂ. ಕಾರಜೋಳ ಅವರು** – ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾ ಪಟುಗಳು ಇರುವ ಮುಧೋಳ ನಗರದಲ್ಲಿ ಕ್ರೀಡಾ ಹಾಸ್ಟೆಲ್ ಮಂಜೂರು ಮಾಡುವುದು ಮತ್ತು ಕೋಚ್ ನೇಮಕ ಮಾಡುವ ಬಗ್ಗೆ ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರ ಗಮನ ಸೆಳೆಯುವುದು.

7. **ಶ್ರೀ ಬಿ.ಬಿ. ನಿಂಗಯ್ಯ ಅವರು** – ರಾಜ್ಯದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ, ಪದವಿ ಪೂರ್ವ ಕಾಲೇಜುಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದ 180ಕ್ಕೂ ಹೆಚ್ಚು ಉಪನ್ಯಾಸಕರುಗಳನ್ನು ಕೆಲಸದಿಂದ ತೆಗೆದು ಹಾಕಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

8. **ಶ್ರೀಯುತರುಗಳಾದ ಎಂ.ಟಿ.ಕೃಷ್ಣಪ್ಪ, ವೈ.ಎಸ್.ವಿ.ದತ್ತಾ, ಎನ್.ಹೆಚ್. ಕೋನರಡ್ಡಿ ಮತ್ತು ಎಂ.ಕೃಷ್ಣಾರೆಡ್ಡಿ ಅವರು** – ದಿನಾಂಕ:21.10.2016 ರಂದು ಬೆಂಗಳೂರಿನ ವಿಧಾನಸೌಧದ ಪಶ್ಚಿಮ ದ್ವಾರದ ಮೂಲಕ ವಕೀಲರೊಬ್ಬರು ವಾಹನ ಸಂಖ್ಯೆ:ಕೆಎ-04-ಎಂಎಂ-9018ರಲ್ಲಿ ಭಾರಿ ಮೊತ್ತದ ಹಣವನ್ನು ಸಾಗಿಸುತ್ತಿದ್ದ ಪ್ರಕರಣವನ್ನು ಮುಚ್ಚಿ ಹಾಕಲು ಪ್ರಯತ್ನಿಸುತ್ತಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

9. **ಶ್ರೀ ಪ್ರತಾಪಗೌಡ ಪಾಟೀಲ್ ಅವರು** – ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿಯ ಮತ್ತು ಬೀದರಿನ ಕಲ್ಯಾಣ ಪತ್ತಿನ ಸೌಹಾರ್ದ ಅಧ್ಯಕ್ಷರು ನಕಲಿ ದಾಖಲೆಗಳನ್ನು ಸೃಷ್ಟಿಸಿ ಸಾರ್ವಜನಿಕರಿಗೆ ವಂಚಿಸುತ್ತಿರುವ ವಿಷಯದ ಬಗ್ಗೆ ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರ ಗಮನ ಸೆಳೆಯುವುದು.

10. **ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ, ಸಾ.ರಾ. ಮಹೇಶ್, ಹೆಚ್.ಎಸ್. ಪ್ರಕಾಶ್, ಸಿ.ಎನ್. ಬಾಲಕೃಷ್ಣ ಮತ್ತು ಕೆ.ಎಂ. ಶಿವಲಿಂಗೇಗೌಡ ಅವರುಗಳು** – ಹಾಸನ ಜಿಲ್ಲೆಯಲ್ಲಿ ಕೊಣನೂರು ಗ್ರಾಮ ಪಂಚಾಯ್ತಿಯನ್ನೊಳಗೊಂಡಂತೆ 2016ರಲ್ಲಿ ಮುಕ್ತಾಯವಾಗುವ ಗ್ರಾಮಪಂಚಾಯ್ತಿಗಳಿಗೆ ಅಧ್ಯಕ್ಷ / ಉಪಾಧ್ಯಕ್ಷರ ಚುನಾವಣೆ ನಡೆಸಲು ಆದೇಶವಾಗಿದ್ದರೂ ಸಹ ಉದ್ದೇಶ ಪೂರ್ವಕವಾಗಿ ನಿಗದಿತ ಅವಧಿಯೊಳಗೆ ಚುನಾವಣೆಯನ್ನು ನಡೆಸದೇ, ಕಾನೂನು ಉಲ್ಲಂಘಿಸಿರುವ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಸೂಕ್ತ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

11. **ಶ್ರೀ ಬಸವರಾಜ ನೀಲಪ್ಪ ಶಿವಣ್ಣನವರ್ ಅವರು** – ಹಾವೇರಿ ಜಿಲ್ಲೆ ಬ್ಯಾಡಗಿ ತಾಲ್ಲೂಕಿನಲ್ಲಿ 20 ಮೆಗಾವ್ಯಾಟ್ ಸೌರ ವಿದ್ಯುತ್ ಉತ್ಪಾದಿಸಲು ಸ್ಥಳಾವಕಾಶ ಮಂಜೂರು ಮಾಡಿ ಕಾಮಗಾರಿ ಪ್ರಾರಂಭಿಸುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

12. **ಶ್ರೀ ಬಿ. ಸುರೇಶ್ ಗೌಡ ಅವರು** – ತುಮಕೂರು ಜಿಲ್ಲಾ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯ ರಾಷ್ಟ್ರೀಯ ಹೆದ್ದಾರಿ ಸಿ.ಆರ್.ಎಫ್. ಯೋಜನೆಗೆ ಬಿಡುಗಡೆ ಮಾಡಿರುವ ಅನುದಾನದಲ್ಲಿನ ತಾರತಮ್ಯವನ್ನು ಸರಿಪಡಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

13. **ಶ್ರೀ ವೈ.ಎ. ನಾರಾಯಣಸ್ವಾಮಿ ಅವರು** – ಬೆಂಗಳೂರು ಉತ್ತರ ತಾಲ್ಲೂಕು, ಕಸಬಾ ಹೋಬಳಿ ಮತ್ತು ಹೆಬ್ಬಾಳ ಅಮಾನಿಕೆರೆ ಗ್ರಾಮಗಳಲ್ಲಿ ಮೆ॥ ಲೇಕ್‌ವ್ಯೂ ಟೂರಿಸಂ ಕಾರ್ಪೋರೇಷನ್ ಲಿಮಿಟೆಡ್ ರವರ ಉದ್ದೇಶಿತ ಯೋಜನೆಗಾಗಿ ಕೆ.ಐ.ಎ.ಡಿ.ಬಿ ಕಾಯ್ದೆಯನ್ವಯ 2014ರಲ್ಲಿ ಭೂ-ಸ್ವಾಧೀನ ಮಾಡಿದ್ದು, ಯೋಜನೆಯು ವಿಫಲವಾಗಿರುವುದರಿಂದ, ಜಮೀನುಗಳನ್ನು ಸ್ವಾಧೀನದಲ್ಲಿರುವ ಮೂಲ ಮಾಲೀಕರುಗಳಿಗೇ ಬಿಟ್ಟುಕೊಡುವುದು ಹಾಗೂ ಅಧಿಸೂಚನೆಯನ್ನು ರದ್ದುಪಡಿಸುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

14. **ಶ್ರೀ ಪಿ. ರಾಜೀವ್ ಅವರು** – ಬೆಂಗಳೂರು ವಿಶ್ವವಿದ್ಯಾಲಯದ ವ್ಯಾಪ್ತಿಯ ಯು.ವಿ.ಸಿ.ಇ ಕಾಲೇಜಿನಲ್ಲಿ ಸರ್ಕಾರದ ಮಾರ್ಗಸೂಚಿಯನ್ನು ಉಲ್ಲಂಘಿಸಿ ಪ್ರಾಧ್ಯಾಪಕರುಗಳಿಗೆ ವೃತ್ತಿ ಪ್ರಗತಿ ಯೋಜನೆಯಡಿ ಮುಂಬಡ್ತಿ ಪ್ರಕ್ರಿಯೆಯನ್ನು ತಡೆಹಿಡಿಯುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

15. **ಶ್ರೀ ಸಂಜಯ್ ಬಿ. ಪಾಟೀಲ್ ಅವರು** –ಮನೆ ಕೆಲಸದ ಕಾರ್ಮಿಕರಿಗೆ, ಪಿಂಚಣಿ, ವೈದ್ಯಕೀಯ, ಶೈಕ್ಷಣಿಕ ಮತ್ತು ಇನ್ನಿತರ ಸೌಲಭ್ಯಗಳನ್ನು ಸಾಮಾಜಿಕ ಭದ್ರತೆಯ ದೃಷ್ಟಿಯಿಂದ ಸಮರ್ಪಕವಾಗಿ ಕಲ್ಪಿಸುವ ಬಗ್ಗೆ ಕ್ರಮಕೈಗೊಳ್ಳಲು ಮಾನ್ಯ ಕಾರ್ಮಿಕ ಸಚಿವರ ಗಮನ ಸೆಳೆಯುವುದು.

16. **ಶ್ರೀ ಕೆ. ಶಿವಮೂರ್ತಿ ಅವರು** – ಮಾಯಕೊಂಡ ವಿಧಾನಸಭಾ ಕ್ಷೇತ್ರದ ಮಧುರ ನಾಯಕನಹಳ್ಳಿಯ 500 ಎಕರೆ ಪ್ರದೇಶದಲ್ಲಿ ಬೆಲೆ ಬಾಳುವ ಬೆಳೆ ಮತ್ತು ಗಿಡ-ಮರಗಳು ಸುಟ್ಟು ಹೋಗಿರುವುದರಿಂದ ಸಂಕಷ್ಟದಲ್ಲಿರುವ ಪರಿಶಿಷ್ಟ ಜಾತಿಯ ಕುಟುಂಬಗಳಿಗೆ ಪುನರ್ ವಸತಿ ಯೋಜನೆಯಡಿಯಲ್ಲಿ ಸೂಕ್ತ ಪರಿಹಾರ ಮತ್ತು ಮೂಲಸೌಲಭ್ಯಗಳನ್ನು ಒದಗಿಸಿಕೊಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

17. **ಶ್ರೀ ಕಾಶಪ್ಪನವರ್ ವಿಜಯಾನಂದ್ ಶಿವಶಂಕರಪ್ಪ ಅವರು** –ಬಾಗಲಕೋಟೆ ಜಿಲ್ಲೆ, ಇಲಕಲ್ಲ ನಗರದಲ್ಲಿನ ಕೆ.ಐ.ಎ.ಡಿ.ಬಿ., ಜಾಗವನ್ನು ಅಭಿವೃದ್ಧಿ ಕಾರಣಗಳಿಗಾಗಿ ಬಳಸದೇ ಇರುವುದರಿಂದ ಜವಳಿ ಪಾರ್ಕ್ ಮತ್ತು ಗ್ರಾನೈಟ್ ಪಾರ್ಕ್ ಅಭಿವೃದ್ಧಿಪಡಿಸಲು ತೊಂದರೆಯಾಗಿರುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

18. **ಶ್ರೀ ಖಮುರುಲ್ ಇಸ್ಲಾಂ ಅವರು** – ಉರ್ದು, ಅಲ್ಪಸಂಖ್ಯಾತರ ಅನುದಾನಿತ ಶಾಲೆಗಳಲ್ಲಿ ಹೆಚ್ಚುವರಿ ಕನ್ನಡ ಶಿಕ್ಷಕರಿಗೆ ವೇತನಾನುದಾನವನ್ನು ಬಿಡುಗಡೆ ಮಾಡದೇ ಇರುವುದರಿಂದ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

19. **ಶ್ರೀ ಕಾಶಪ್ಪನವರ್ ವಿಜಯಾನಂದ್ ಶಿವಶಂಕರಪ್ಪ ಅವರು** – ಬಾಗಲಕೋಟೆ ಜಿಲ್ಲಾ ಪಂಚಾಯ್ತಿಗೆ 2013 ರಿಂದ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನವನ್ನು ಯೋಜನೆಗಳ ಅನುಷ್ಠಾನದಲ್ಲಿ ದುರ್ಬಳಕೆಯಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

20. **ಶ್ರೀ ಸಾ.ರಾ. ಮಹೇಶ್ ಅವರು** – ರೈತರ ಬೆಳೆಗಳಿಗೆ ಹಾರಂಗಿ ಜಲಾಶಯದಿಂದ ನೀರನ್ನು ಹರಿಸುವುದು, ಇಲ್ಲದಿದ್ದಲ್ಲಿ, ಬೆಳೆ ಹಾನಿಯಿಂದ ನಷ್ಟವನ್ನು ಅನುಭವಿಸುವ ರೈತರಿಗೆ ಪರಿಹಾರವನ್ನು ನೀಡುವ ಬಗ್ಗೆ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

21. **ಶ್ರೀ ಖಮುರುಲ್ ಇಸ್ಲಾಂ ಅವರು** – ಉದ್ಯೋಗ ಮತ್ತು ತರಬೇತಿ ಇಲಾಖೆ(ಆಡಳಿತ)ಯ ಅಧಿಕಾರಿಯ ವಿರುದ್ಧ ಲೋಕಾಯುಕ್ತ ಮೊಕದ್ದಮೆಗಳು ಬಾಕಿಯಿದ್ದರೂ ನಿಯಮಬಾಹಿರವಾಗಿ ಜಂಟಿ ನಿರ್ದೇಶಕರಾಗಿ ಮುಂಬಡ್ತಿ ನೀಡಿ ಮುಂದುವರೆಸುತ್ತಿರುವ ಬಗ್ಗೆ ಮಾನ್ಯ ಕಾರ್ಮಿಕ ಸಚಿವರ ಗಮನ ಸೆಳೆಯುವುದು.

22. **ಶ್ರೀ ಪಿ. ರಾಜೀವ್ ಅವರು** – ಬೆಳಗಾವಿ ಜಿಲ್ಲೆಯ ಕುಡಚಿ ಕ್ಷೇತ್ರದಲ್ಲಿ ನೂತನವಾಗಿ ಘೋಷಣೆಯಾಗಿರುವ ಪಂಚಾಯ್ತಿಗಳಿಗೆ ಸಿಬ್ಬಂದಿ ನೇಮಕ ಮಾಡದಿರುವುದರಿಂದ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

23. **ಶ್ರೀ ಸಾ.ರಾ. ಮಹೇಶ್ ಅವರು** – ಮೈಸೂರು ಜಿಲ್ಲೆಯಲ್ಲಿ ಎಸ್.ಸಿ.ಪಿ ಮತ್ತು ಎಸ್.ಟಿ.ಪಿ ಅನುದಾನ ಹಂಚಿಕೆಯಲ್ಲಿ ತಾರತಮ್ಯವೆಸಗಿರುವುದರಿಂದ ಅಭಿವೃದ್ಧಿ ಕಾಮಗಾರಿಗಳು ಸ್ಥಗಿತಗೊಂಡಿರುವ ಬಗ್ಗೆ ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

24. **ಶ್ರೀ ಸಿ.ಎನ್. ಬಾಲಕೃಷ್ಣ ಮತ್ತು ಶ್ರೀ ಹೆಚ್.ಎಸ್. ಪ್ರಕಾಶ್** ಅವರುಗಳು – ಹಾಸನ ಜಿಲ್ಲೆಯಲ್ಲಿ ಮಳೆ ಹಾನಿ ಕಾಮಗಾರಿಗಳಿಗಾಗಿ ಅನುದಾನ ಬಿಡುಗಡೆ ಮಾಡಲು ತಾರತಮ್ಯ ಮಾಡುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

25. **ಶ್ರೀ ಎನ್. ಚೆಲುವರಾಯಸ್ವಾಮಿ ಅವರು** – ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರ ಗುತ್ತಿಗೆ ಸಿಬ್ಬಂದಿಗಳನ್ನು ಖಾಯಂಗೊಳಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

26. **ಶ್ರೀ ಹೆಚ್.ಡಿ. ರೇವಣ್ಣ ಅವರು** – ಹಾಸನ ಜಿಲ್ಲೆಯ ವಿವಿಧ ಗ್ರಾಮಗಳಿಗೆ ಕುಡಿಯುವ ನೀರಿನ ಯೋಜನೆಗೆ ಎಸ್.ಟಿ.ಎ ಮತ್ತು ಎಸ್.ಎಲ್.ಎಸ್.ಎಸ್.ಸಿ ಸಮಿತಿಯ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

27. **ಶ್ರೀ ಡಿ.ಎನ್. ಜೀವರಾಜ್ ಅವರು** – ರಾಜ್ಯ ಸರ್ಕಾರದ ನಗರ ಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯ್ತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಖಾಯಂಗೊಳಸುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

28. **ಶ್ರೀ ಹೆಚ್.ಎಸ್. ಪ್ರಕಾಶ್** ಅವರು – ಹಾಸನ ತಾಲ್ಲೂಕಿನ ಸತ್ಯಮಂಗಲ ಗ್ರಾಮಪಂಚಾಯ್ತಿಯ ಸುಮಾರು 11 ಗ್ರಾಮಗಳಗೆ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ವರದಿಯಂತೆ ಕಾಮಗಾರಿಯನ್ನು ಆರಂಭಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

29. **ಶ್ರೀ ವಿಶ್ವನಾಥ್ ಈ ಪಾಟೀಲ್ ಅವರು** – ಬೈಲಹೊಂಗಲ ಕ್ಷೇತ್ರದ ಸಾನಿಕೊಪ್ಪ ಗ್ರಾಮದಿಂದ ಕರಿಪಟ್ಟಿ ಗ್ರಾಮದವರೆಗಿನ 36 ಕಿ.ಮೀ ರಸ್ತೆಯನ್ನು ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

30. **ಶ್ರೀ ಎ.ಎಸ್. ಪಾಟೀಲ್ (ನಡಹಳ್ಳಿ) ಅವರು** – ಸಿಂದಗಿ, ಮುದ್ದೇಬಿಹಾಳ, ಬಸವನಬಾಗೇವಾಡಿ ತಾಲ್ಲೂಕುಗಳಗೆ ಮಳೆ ಬಾರದೆ ಬೆಳೆಹಾನಿಯಾಗಿದ್ದು, ರೈತರಿಗೆ ಪರಿಹಾರ ನೀಡುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

31. **ಶ್ರೀ ಸಿ.ಬಿ. ಸುರೇಶ್ ಬಾಬು ಅವರು** – ಜಯನಗರದ ಕೇಂದ್ರೀಯ ಸರ್ಕಾರಿ ಔಷಧಾಗಾರದ ಆವರಣದಲ್ಲಿರುವ ಆಯುರ್ವೇದಿಯ ಔಷಧಗಳ ಪರೀಕ್ಷಾ ಪ್ರಯೋಗಾಲಯದಲ್ಲಿ ಖಾಲಿಯಿರುವ ಸರ್ಕಾರಿ ವಿಶ್ಲೇಷಕರ (ಸೈಂಟಿಫಿಕ್ ಆಫೀಸರ್) ಹುದ್ದೆಯನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು

32. **ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು** – ಕೇಂದ್ರ ಸರ್ಕಾರದ ಹೊಸ ಭೂ-ಕಾಯ್ದೆ ಅನ್ವಯ ಕೈಗಾರಿಕಾ ಮತ್ತು ಇತರೆ ಉದ್ದೇಶಗಳಗೆ ರೈತರಿಂದ ಮತ್ತು ಸಾರ್ವಜನಿಕರಿಂದ ಸ್ವಾಧೀನಪಡಿಸಿಕೊಂಡ ಜಮೀನುಗಳಗೆ ಸೂಕ್ತ ಪರಿಹಾರ ಸಿಗದೆ ರೈತರಿಗೆ ಮತ್ತು ಸಾರ್ವಜನಿಕರಿಗೆ ಅನ್ಯಾಯವಾಗಿರುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

33. **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಮತ್ತು ಶ್ರೀ ಬಿ.ಬಿ. ನಿಂಗಯ್ಯ ಅವರುಗಳು** – ರಾಜ್ಯದಲ್ಲಿ ಬಗರಹುಕ್ಕುಂ ಸಾಗುವಳಿದಾರರ ಅರ್ಜಿಗಳನ್ನು ಪರಿಶೀಲಿಸುತ್ತಿದ್ದು, ಅನೇಕ ತೊಡಕುಗಳಿಂದ ಬಡ ಸಾಗುವಳಿದಾರರಿಗೆ ಮಂಜೂರಾತಿ ನೀಡಲು ಅಕ್ರಮ-ಸಕ್ರಮ ಸಮಿತಿಗೆ ಅಸಾಧ್ಯವಾಗಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

34. **ಶ್ರೀ ವಿ. ಸುನೀಲ್ ಕುಮಾರ್ ಅವರು** – ಉಡುಪಿ ಜಿಲ್ಲೆ ಕಾರ್ಕಳ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಗೆ ಖಾಯಂ ವೈದ್ಯರ ನೇಮಕ ಮಾಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

35. **ಶ್ರೀ ಕೆ.ಜಿ. ಬೋಪಯ್ಯ ಅವರು** – ಕೊಡಗು ಜಿಲ್ಲೆಯ ಆರು ಗ್ರಾಮ ಪಂಚಾಯ್ತಿಗಳಲ್ಲಿ ತೆರಿಗೆ ವಸೂಲಿಯಲ್ಲಿ ಲೋಪವಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

36. **ಶ್ರೀ ಗೋವಿಂದ ಎಂ. ಕಾರಜೋಳ ಅವರು** – ಕೃಷಿ ಚಟುವಟಿಕೆಗಳನ್ನು ನಡೆಸಲು ಅನುಕೂಲವಾಗುವಂತೆ ಕೂಡಲ ಸಂಗಮ ಗ್ರಾಮ ಪಂಚಾಯ್ತಿಯ ವ್ಯಾಪ್ತಿಯಲ್ಲಿ ಕಿಸಾನ್ ಸೇವಾ ಕೇಂದ್ರವನ್ನು ಸ್ಥಾಪಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

37. **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು** – ಚಿಕ್ಕಬಳ್ಳಾಪುರ ಜಿಲ್ಲೆಯ, ಬಾಗೇಪಲ್ಲಿ ಕ್ಷೇತ್ರದ ಸೋಮನಹಳ್ಳಿ ಗ್ರಾಮಪಂಚಾಯ್ತಿ ಕಟ್ಟಡಕ್ಕೆ ಬೆಂಕಿ ಹಚ್ಚಿ ದಾಖಲಾತಿಗಳ ನಾಶಕ್ಕೆ ಕಾರಣವಾಗಿರುವವರ ವಿರುದ್ಧ 3 ವರ್ಷಗಳು ಕಳೆದರೂ ಕ್ರಮಕೈಗೊಳ್ಳದಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

38. **ಶ್ರೀ ಕೆ.ಬಿ. ಪ್ರಸನ್ನ ಕುಮಾರ್ ಅವರು** – ಶಿವಮೊಗ್ಗ ನಗರ, ಮಲೆನಾಡಿನ ಜನರಿಗೆ ಕರ್ನಾಟಕ ಗೃಹ ಮಂಡಳಿಯಿಂದ ಬಡಾವಣೆ ನಿರ್ಮಿಸಿ ವಸತಿ ರಹಿತರಿಗೆ ಸ್ವಂತ ಮನೆಗಳನ್ನು ನಿರ್ಮಿಸಿಕೊಡುವ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.

39. **ಶ್ರೀ ಬಿ. ಸುರೇಶ್ ಗೌಡ ಅವರು** – 2004ರಲ್ಲಿ ಸ್ಥಾಪನೆಗೊಂಡಿರುವ ತುಮಕೂರು ವಿಶ್ವವಿದ್ಯಾಲಯಕ್ಕೆ ಅತ್ಯವಶ್ಯಕವಾದ ಕ್ಯಾಂಪಸ್ ನಿರ್ಮಾಣಕ್ಕೆ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

40. **ಶ್ರೀ ಟಿ. ರಘುಮೂರ್ತಿ ಅವರು** – ಚಳ್ಳಕೆರೆ ವಿಧಾನಸಭಾ ಕ್ಷೇತ್ರದ, ಚಿತ್ರದುರ್ಗ ತಾಲ್ಲೂಕಿನ ಬೆಳಘಟ್ಟ ಗ್ರಾಮದಲ್ಲಿ ಪದವಿ ಪೂರ್ವ ಕಾಲೇಜನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

41. **ಶ್ರೀ ಸಿ.ಟಿ. ರವಿ ಅವರು** – ಚಿಕ್ಕಮಗಳೂರು ಜಿಲ್ಲೆಯಲ್ಲಿ ಎಂ.ಜಿ.ಎನ್.ಆರ್.ಎ.ಜಿ.ಎ ಯೋಜನೆಯಡಿ ಬಿಲ್ಲುಗಳು ಪಾವತಿಗೆ ಬಾಕಿಯಿರುವುದರಿಂದ, ಕಾಮಗಾರಿಗಳನ್ನು ನಿರ್ವಹಿಸಿದ ಕೂಲಿಗಾರರು ಹಾಗೂ ಸರಬರಾಜುದಾರರು ಸಂಕಷ್ಟದಲ್ಲಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

42. **ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು** – ಕನ್ನಡ ಸಾಹಿತ್ಯ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದವರಿಗೆ ಪಂಪ ಪ್ರಶಸ್ತಿಯನ್ನು ಬನವಾಸಿಯ ಕದಂಬೋತ್ಸವ ಕಾರ್ಯಕ್ರಮದಲ್ಲಿ ವಿತರಿಸುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

43. **ಶ್ರೀ ನಾರಾಯಣ ಗೌಡ ಅವರು** – ಕೆ.ಆರ್. ಪೇಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹಲವಾರು ಪುರಾತನ ದೇವಸ್ಥಾನಗಳಲ್ಲಿ ವಿಗ್ರಹಗಳು, ಆಭರಣಗಳು ಮತ್ತು ಇನ್ನಿತರ ಅಮೂಲ್ಯವಾದ ವಸ್ತುಗಳು ಕಳುವಾಗಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

44. **ಶ್ರೀ ಬಿ.ಆರ್. ಯಾವಗಲ್ ಅವರು** – ಬರಗಾಲದಿಂದ ಬೆಳೆ ನಾಶ, ಕುಡಿಯುವ ನೀರಿನ ಸಮಸ್ಯೆಯನ್ನು ನೀಗಿಸುವ ಸಲುವಾಗಿ ಯನ್ನು ಮಲಪ್ರಭಾ ನದಿಯಿಂದ ಕನಿಷ್ಠ 4 ಟಿ.ಎಂ.ಸಿ. ನೀರನ್ನು ಹರಿಸುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

45. **ಶ್ರೀ ಪಿ. ರಾಜೀವ್ ಅವರು** – ರಾಯಭಾಗ ತಾಲ್ಲೂಕಿನ ಕುಡಚಿ ಪೋಲೀಸ್ ಠಾಣೆ ವ್ಯಾಪ್ತಿಯಲ್ಲಿ ಅಕ್ರಮವಾಗಿ ದನದ ಕೊಬ್ಬನ್ನು ಸಸ್ಯಾಹಾರಿ ತುಪ್ಪವೆಂದು ವ್ಯಾಪಾರ ಮಾಡಿ ಮೋಸ ಮಾಡಿರುವ ಪ್ರಕರಣವನ್ನು ಸಿ.ಐ.ಡಿ.ಗೆ ವಹಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

46. **ಶ್ರೀ ಹೆಚ್.ಡಿ. ರೇವಣ್ಣ ಅವರು** – ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ ಹಿರೀಸಾವೆ–ಚಟ್ಟಹಳ್ಳಿ ರಾಜ್ಯ ಹೆದ್ದಾರಿ 8ರಲ್ಲಿ ತಿರುಮಲಾಪುರ ಮಾರ್ಗವಾಗಿ ಎಣ್ಣೆಹೊಳೆ ರಂಗನಾಥಸ್ವಾಮಿ ಬೆಟ್ಟದಲ್ಲಿರುವ ಶ್ರೀ ರಂಗನಾಥ ಸ್ವಾಮಿ ದೇವಸ್ಥಾನದವರೆಗಿನ ರಸ್ತೆ ಕಾಮಗಾರಿಗಳಗಾಗಿ ಅವಶ್ಯವಿರುವ ಅನುದಾನವನ್ನು ಮಂಜೂರು ಮಾಡದಿರುವ ಬಗ್ಗೆ ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರ ಗಮನ ಸೆಳೆಯುವುದು.

47. **ಶ್ರೀ ವೈ.ಎ. ನಾರಾಯಣಸ್ವಾಮಿ ಅವರು** – ಹೆಬ್ಬಾಳ ಕ್ಷೇತ್ರದ 14 ಕೊಳಚೆ ಪ್ರದೇಶದಲ್ಲಿ ವಾಸಿಸುತ್ತಿರುವ ನಾಗರಿಕರಿಗೆ ಸರ್ಕಾರ ನೀಡಿದ ಭರವಸೆಯಂತೆ ಹಕ್ಕುಪತ್ರ ನೀಡದಿರುವ ಬಗ್ಗೆ ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಗಮನ ಸೆಳೆಯುವುದು.

48. **ಶ್ರೀ ಸಿ.ಎನ್. ಬಾಲಕೃಷ್ಣ ಮತ್ತು ಶ್ರೀ ಹೆಚ್.ಡಿ. ರೇವಣ್ಣ ಅವರು** – ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ ಮಾವಿನಕೆರೆ ಬೆಟ್ಟದ ಅತ್ಯಂತ ಪುರಾತನವಾದ ಶ್ರೀ ರಂಗನಾಥಸ್ವಾಮಿ ದೇವಸ್ಥಾನ ಬಳಿಯಿರುವ ಪ್ರವಾಸಿ ಮಂದಿರಕ್ಕೆ ಮೂಲಭೂತ ಸೌಕರ್ಯಗಳಗಾಗಿ ಅನುದಾನವನ್ನು ಬಿಡುಗಡೆ ಮಾಡದಿರುವ ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರ ಗಮನ ಸೆಳೆಯುವುದು.

49. **ಶ್ರೀ ಸಿದ್ದು ಬಿ. ನ್ಯಾಮಗೌಡ ಅವರು** – ಕೃಷ್ಣಾ ಮೇಲ್ದಂಡೆ ಪುನರ್ ವಸತಿ ಕೇಂದ್ರ ಹಾಗೂ ಪುನರ್ ನಿರ್ಮಾಣ ಕೇಂದ್ರ ಮತ್ತು ಭೂಸ್ವಾಧೀನ ಪ್ರಕ್ರಿಯೆಯಲ್ಲಿ 105 ಪುನರ್ ವಸತಿ ಕೇಂದ್ರಗಳನ್ನು ಗ್ರಾಮ ಪಂಚಾಯ್ತಿಗೆ ಹಸ್ತಾಂತರ ಮಾಡುವ ಪ್ರಕ್ರಿಯೆಯಲ್ಲಿ ಮೊದಲಿನಂತೆ ಗ್ರಾಮಗಳ ಪುನರ್ ವಸತಿ ಕೇಂದ್ರಗಳ ಅಸ್ತಿತ್ವವನ್ನು ಉಳಿಸಿಕೊಳ್ಳುವುದಲ್ಲದೇ ನೀರು ಸರಬರಾಜು ಮಾಡುತ್ತಿರುವ ದಿನಗೂಲಿ ನೌಕರರನ್ನು ಸರ್ಕಾರಿ ನೌಕರರೆಂದು ಪರಿಗಣಿಸುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

50. **ಶ್ರೀ ಎಸ್. ಚಿಕ್ಕಮಾದು ಅವರು** – ಮೈಸೂರು ಜಿಲ್ಲೆ ಹೆಚ್.ಡಿ.ಕೋಟೆ ತಾಲ್ಲೂಕಿನ ಬೇಲದಕುಪ್ಪೆಯ ಅರಣ್ಯ ಪ್ರದೇಶದಲ್ಲಿರುವ ಪುರಾತನ ಶ್ರೀ ಮಹಾದೇಶ್ವರ ಸ್ವಾಮಿಯ ದೇವಸ್ಥಾನಕ್ಕೆ ಭಕ್ತಾದಿಗಳನ್ನು ಹಾಗೂ ವಾಹನಗಳನ್ನು ಸ್ಥಳೀಯ ಅರಣ್ಯಾಧಿಕಾರಿಯವರು ಪ್ರವೇಶ ನಿರ್ಬಂಧಿಸಿರುವುದಲ್ಲದೇ, ದೇವಾಲಯದ ಸಮಿತಿಯ 14 ಜನ ಟ್ರಸ್ಟಿಗಳ ವಿರುದ್ಧ ಮೊಕದ್ದಮೆಯನ್ನು ದಾಖಲಿಸಿರುವ ವಿಷಯದ ಬಗ್ಗೆ ಮಾನ್ಯ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರ ಗಮನ ಸೆಳೆಯುವುದು.

51. **ಶ್ರೀ ಬಿ.ಆರ್. ಯಾವಗಲ್ ಮತ್ತು ಶ್ರೀ ಗುರುಪಾದಗೌಡ ಸಂಗನಗೌಡ ಪಾಟೀಲ್ ಅವರುಗಳು** – ಮಲಪ್ರಭಾ ನೀರಾವರಿ ಯೋಜನೆಯ ಕಾಲುವೆಗಳನ್ನು ಅಧುನೀಕರಣಗೊಳಸುವ ಕಾಮಗಾರಿಗಳನ್ನು ಪ್ರಾರಂಭಿಸುವಲ್ಲಿ ಆಗುತ್ತಿರುವ ವಿಳಂಬದ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

52. **ಶ್ರೀ ಆನಂದ ಅಲಿಯಾಸ್ ವಿಶ್ವನಾಥ ಚಂದ್ರಶೇಖರ ಮಾಮನಿ ಅವರು** – ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಕೆ.ಆರ್.ಐ.ಡಿ.ಎಲ್., ಸಂಸ್ಥೆಯ ಬದಲಾಗಿ ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗಕ್ಕೆ ಕಾಮಗಾರಿಗಳನ್ನು ಅನುಷ್ಠಾನಗೊಳಸಲು ಆದೇಶ ನೀಡಿರುವ ಬಗ್ಗೆ ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

53. **ಶ್ರೀ ಅರವಿಂದ ಚಂದ್ರಕಾಂತ ಬೆಲ್ಲದ ಅವರು** – ಹುಬ್ಬಳ್ಳಿ – ಧಾರವಾಡ ಕಾರ್ಪೋರೇಷನ್‌ಗೆ ನಗರಾಭಿವೃದ್ಧಿ ಇಲಾಖೆಯಿಂದ ಕಳೆದ 2 ವರ್ಷದಲ್ಲಿ ಸುಮಾರು 70 ಕೋಟಿಯಷ್ಟು ನಿವೃತ್ತ ನೌಕರರ ಪಿಂಚಣಿ ಹಣ ಮರುಪಾವತಿಯಾಗದಿರುವುದರಿಂದ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ನಗರಾಭಿವೃದ್ಧಿ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

54. **ಶ್ರೀ ಅಪ್ಪಾಜಿ.ಸಿ.ಎಸ್. ನಾಡಗೌಡ ಅವರು** – ಬಾಲಸಂಜೀವಿನಿ ಯೋಜನೆಯನ್ನು ಸ್ಥಗಿತಗೊಳಸಿರುವುದರಿಂದ ಸಾರ್ವಜನಿಕರಿಗೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

4. ಅರ್ಧ ಗಂಟೆ ಕಾಲಾವಧಿ ಚರ್ಚೆ

1. **ಶ್ರೀ ಬಸವರಾಜ ಎಸ್. ಬೊಮ್ಮಾಯಿ ಅವರು** – 'ಕೆ.ಯು.ಡಬ್ಲ್ಯೂ.ಎಸ್ ಅಂಡ್ ಡಿ.ಬಿ.ಯಿಂದ ಕೈಗೊಂಡಿರುವ ಕಾಮಗಾರಿಗಳ' ಬಗ್ಗೆ ದಿನಾಂಕ: 29.11.2016 ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ 7ನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 94(807)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

2. **ಶ್ರೀ ಜೆ.ಟಿ. ಪಾಟೀಲ್ ಅವರು** – "ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ 'E-trading'ನ್ನು ಸಮರ್ಪಕವಾಗಿ ಅನುಷ್ಠಾನಗೊಳಸಿ ರೈತರಿಗೆ ಸಕಾಲದಲ್ಲಿ 'E-payment' ಜಾರಿ ಮಾಡುವ ಬಗ್ಗೆ" ದಿನಾಂಕ: 25.11.2016ರ ಗಮನ ಸೆಳೆಯುವ ಸೂಚನೆಯಲ್ಲಿ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

3. **ಶ್ರೀ ಕೆ.ಎಸ್. ಮಂಜುನಾಥಗೌಡ ಅವರು** – "ಶಾಲಾ – ಕಾಲೇಜುಗಳ ಕಟ್ಟಡಗಳ ದುರಸ್ಥಿ" ಬಗ್ಗೆ ದಿನಾಂಕ: 30.11.2016 ರಂದು ಸದನದಲ್ಲಿ ಉತ್ತರಿಸುವ 8ನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 119(1451)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

4. **ಶ್ರೀ ಎನ್. ಚೆಲುವರಾಯಸ್ವಾಮಿ ಅವರು** – "ಸೌರ ವಿದ್ಯುತ್ ಘಟಕಗಳ ಸ್ಥಾಪನೆ" ಬಗ್ಗೆ ದಿನಾಂಕ: 25.11.2016 ರಂದು ಸದನದಲ್ಲಿ ಉತ್ತರಿಸುವ 5ನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:61(1049)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧಗಂಟೆ ಕಾಲ ಚರ್ಚಿಸುವುದು.

5. **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು** – "ಹಾಸನ ಜಿಲ್ಲೆ ಸಕಲೇಶಪುರ ಮತ್ತು ಆಲೂರು ತಾಲ್ಲೂಕಿನಲ್ಲಿ ಆನೆ ದಾಳಿಗೊಳಗಾದವರಿಗೆ ಪರಿಹಾರ ನೀಡುವ ಬಗ್ಗೆ ಹಾಗೂ ಆನೆ ಕಾರಿಡಾರ್ ಸ್ಥಾಪನೆ ಬಗ್ಗೆ" ದಿನಾಂಕ: 30.11.2016 ರಂದು ಗಮನ ಸೆಳೆಯುವ ಸೂಚನೆಯಲ್ಲಿ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧಗಂಟೆ ಕಾಲ ಚರ್ಚಿಸುವುದು.

6. **ಶ್ರೀ ಜೆ.ಟಿ. ಪಾಟೀಲ್ ಅವರು** – ಆಲಮಟ್ಟಿ ಜಲಾಶಯದಲ್ಲಿ ಮುಳುಗಡೆ ಆಗುತ್ತಿರುವ ಭೂಮಿಗಳ ಬೆಲೆಯನ್ನು ನಿರ್ಧರಿಸಲು ಸಮಿತಿ ರಚಿಸುವ ಬಗ್ಗೆ ದಿನಾಂಕ: 30.11.2016ರ ಗಮನ ಸೆಳೆಯುವ ಸೂಚನೆಯಲ್ಲಿ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

7. **ಶ್ರೀ ಸಾ.ರಾ. ಮಹೇಶ್ ಅವರು** – ಲೋಕೋಪಯೋಗಿ ಇಲಾಖೆಯಲ್ಲಿ ಸಿ.ಆರ್.ಎಫ್ ಅನುದಾನವನ್ನು ಬಿಡುಗಡೆಗೊಳಿಸುವಲ್ಲಿ ತಾರತಮ್ಯವೆಸಗುತ್ತಿರುವುದರಿಂದ ಅಭಿವೃದ್ಧಿ ಕಾಮಗಾರಿಗಳು ಕುಂಠಿತಗೊಂಡಿರುವ ಬಗ್ಗೆ ದಿನಾಂಕ: 30.11.2016ರ ಗಮನ ಸೆಳೆಯುವ ಸೂಚನೆಯಲ್ಲಿ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

5. ಖಾಸಗಿ ಸದಸ್ಯರ ಕಾರ್ಯಕಲಾಪಗಳು

ನಿರ್ಣಯಗಳು

1) ಶ್ರೀ ಕೆ. ಗೋಪಾಲಯ್ಯ ಅವರು ಕೆಳಕಂಡ ನಿರ್ಣಯವನ್ನು ಮಂಡಿಸುವುದು.

"2800ಕ್ಕಿಂತ ಹೆಚ್ಚು ವರ್ಷಗಳ ಇತಿಹಾಸ' ಹೊಂದಿರುವ ತುಳು ಭಾಷೆಯನ್ನು ಸಂವಿಧಾನದ ಎಂಟನೇ ಪರಿಚ್ಛೇದದಲ್ಲಿ ಸೇರಿಸಲು ಕೇಂದ್ರ ಸರ್ಕಾರದ ಮೇಲೆ ಒತ್ತಡ ತರುವ ಬಗ್ಗೆ" ಈ ಸದನವು ಸರ್ಕಾರವನ್ನು ಒತ್ತಾಯಿಸುತ್ತದೆ.

2) ಶ್ರೀ ಕೆ.ಎಸ್. ಪುಟ್ಟಣ್ಣಯ್ಯ ಅವರು ಕೆಳಕಂಡ ನಿರ್ಣಯವನ್ನು ಮಂಡಿಸುವುದು.

"ಸತತವಾದ ಬರದಿಂದ ಕಂಗೆಟ್ಟಿರುವ ರಾಜ್ಯದ ರೈತರ, ಕೃಷಿ ಕಾರ್ಮಿಕರ ಮತ್ತು ಗ್ರಾಮೀಣ ಭಾಗದ ಸ್ವಸಹಾಯ ಸಂಘಗಳ ಸಹಕಾರಿ ಮತ್ತು ರಾಷ್ಟ್ರೀಕೃತ ಬ್ಯಾಂಕುಗಳು ಮತ್ತು ವಿವಿಧ ನಿಗಮ ಮಂಡಳಿಗಳಿಂದ ಪಡೆದ ಸಾಲವನ್ನು ಸಂಪೂರ್ಣ ಮನ್ನಾ ಮಾಡುವುದು, ಬೆಳೆಗಳಿಗೆ ಕೃಷಿ ಬೆಲೆ ನಿಗದಿ ಆಯೋಗ ಲೆಕ್ಕ ಹಾಕಿರುವ ಖರ್ಚು ಮತ್ತು ಅದರ ಮೇಲೆ ರಾಷ್ಟ್ರೀಯ ರೈತ ಆಯೋಗದ ಶಿಫಾರಸ್ಸಿನಂತೆ ವೈಜ್ಞಾನಿಕ ಪರಿಹಾರ ಕೊಡುವುದು ಹಾಗೂ 2009ರ ಕೇಂದ್ರ ಸರ್ಕಾರದ 'ರಾಷ್ಟ್ರೀಯ ಬರ ನಿರ್ವಹಣೆ ಮಾರ್ಗಸೂಚಿ'ಯನ್ವಯ ಬರ ನಿರ್ವಹಣೆ ಮಾಡುವುದು ಈ ಮೂರು ಸೇರಿದಂತೆ ವಿಶೇಷ ಪ್ಯಾಕೇಜ್‌ನ ಒಟ್ಟು ಆರ್ಥಿಕ ಜವಾಬ್ದಾರಿಯಲ್ಲಿ ಶೇಕಡ 35 ರಷ್ಟು ರಾಜ್ಯ ಸರ್ಕಾರವು ವಹಿಸಿಕೊಳ್ಳಬೇಕೆಂದು ಮತ್ತು ಶೇಕಡ 65ರಷ್ಟನ್ನು ಕೇಂದ್ರ ಸರ್ಕಾರ ನೀಡಬೇಕೆಂದು ಒತ್ತಾಯಿಸುವ ಬಗ್ಗೆ " ಈ ಸದನವು ಸರ್ಕಾರವನ್ನು ಒತ್ತಾಯಿಸುತ್ತದೆ.

ಎಸ್.ಮೂರ್ತಿ
ಕಾರ್ಯದರ್ಶಿ (I/C)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm